S-4

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಶಾಂತರಾಮ್ ಬುಡ್ನ ಸಿದ್ದಿ ರವರ ನಿಯಮ 330 ಕ್ಕೆ ಉತ್ತರಿಸುವ ಬಗ್ಗೆ.

**ಸೂಚನೆ:**

ಚಾಮರಾಜನಗರ ಜಿಲ್ಲೆಯಲ್ಲಿ ವಾಸಿಸುತ್ತಿರುವ ಬುಡಕಟ್ಟು ಡೊಂಗ್ರಿ ಗರಾಸಿಯ ಜನಾಂಗವು ಮೂಲಭೂತ ಸೌಕರ್ಯಗಳು ಮತ್ತು ಅನೇಕ ಸರ್ಕಾರಿ ಸೌಲಭ್ಯಗಳಿಂದ ವಂಚಿತರಾಗಿರುವುದರ ಕುರಿತು ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

**ಉತ್ತರ:-**

ಚಾಮರಾಜನಗರ ಜಿಲ್ಲೆಯಲ್ಲಿ ವಾಸಿಸುತ್ತಿರುವ ಬುಡಕಟ್ಟು ಡೊಂಗ್ರಿ ಗರಾಸಿಯ ಜನಾಂಗದ ವಿವರ ಹಾಗೂ ಇವರಿಗೆ ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗಿದೆ

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ಮಾತ್ರ ಡೊಂಗ್ರಿಗರಾಸಿಯ ಜನಾಂಗದವರು ವಾಸಿಸುತ್ತಿರುತ್ತಾರೆ.

- ಒಟ್ಟು ಕುಟುಂಬಗಳ ಸಂಖ್ಯೆ – 40
- ಜಮೀನು ಹೊಂದಿರುವ ಕುಟುಂಬಗಳ ಸಂಖ್ಯೆ – 0
- ಪಕ್ಕಾಮನೆ ಇರುವ ಕುಟುಂಬಗಳ ಸಂಖ್ಯೆ – 37

ಗುಂಡ್ಲುಪೇಟೆ ತಾಲ್ಲೂಕಿನ ನೇನೆಕಟ್ಟೆ ಗ್ರಾಮಪಂಚಾಯತಿ ವ್ಯಾಪ್ತಿಯ ಪಂಜನಹಳ್ಳಿಯಲ್ಲಿ ಡೊಂಗ್ರಿಗರಾಸಿಯ ಜನಾಂಗದವರಿಗೆ ಸರ್ಕಾರದ ವತಿಯಿಂದ ಹೊಸಮನೆಗಳನ್ನು ನಿರ್ಮಾಣ ಮಾಡಲು ಹಾಗೂ ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ರೂ.178.70 ಲಕ್ಷಗಳ ಅನುದಾನವನ್ನು ಈ ಕೆಳಕಂಡಂತೆ ಬಿಡುಗಡೆ ಮಾಡಲಾಗಿದೆ.

- 37 ಮನೆಗಳ ನಿರ್ಮಾಣಕ್ಕೆ ರೂ.3.50 ಲಕ್ಷಗಳಂತೆ ಒಟ್ಟು ರೂ.129.50 ಲಕ್ಷಗಳು ವೆಚ್ಚವಾಗಿದೆ.
- ರೂ.12.20 ಲಕ್ಷಗಳ ವೆಚ್ಚದಲ್ಲಿ ವಿದ್ಯುತ್ ಕಾಮಗಾರಿ ಪ್ರಗತಿಯಲ್ಲಿದೆ.
- ಕುಡಿಯುವ ನೀರಿನ ಕಾಮಗಾರಿ ಕೈಗೊಳ್ಳಲು ರೂ.25.00 ಲಕ್ಷಗಳನ್ನು ನಿಗಧಿಪಡಿಸಲಾಗಿದೆ.
- ರೂ.12.00 ಲಕ್ಷಗಳ ಅನುದಾನದಲ್ಲಿ ಸಮುದಾಯ ಭವನವನ್ನು ನಿರ್ಮಾಣ ಮಾಡಲಾಗಿದೆ.

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ವತಿಯಿಂದ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯಡಿ ಈ ಕೆಳಕಂಡಂತೆ ಸಾಲಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ.

- 2020-21ನೇ ಸಾಲಿನಲ್ಲಿ 12 ಫಲಾನುಭವಿಗಳಿಗೆ ರೂ.3.00 ಲಕ್ಷಗಳ ಸಹಾಯಧನ ಮತ್ತು 3.00 ಲಕ್ಷಗಳ ಸಾಲವನ್ನು ನೀಡಲಾಗಿದೆ.
- 2021-22ನೇ ಸಾಲಿನಲ್ಲಿ 02 ಫಲಾನುಭವಿಗಳಿಗೆ ರೂ.50,000/- ಸಹಾಯಧನ ಹಾಗೂ ರೂ.50000/- ಸಾಲವನ್ನು ನೀಡಲಾಗಿದೆ.

ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ವತಿಯಿಂದ 2023-24ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡದ ಅಲೆಮಾರಿ ಸಮುದಾಯದವರಿಗೆ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಡೊಂಗ್ರಿ ಗರಾಸಿಯಾ ಸಮುದಾಯದವರಿಂದ ಸ್ವೀಕರಿಸಲಾದ ಅರ್ಜಿಗಳನ್ನು ಅರ್ಹತೆಯನುಸಾರ ಪರಿಶೀಲಿಸಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಜಿಲ್ಲಾ ಆಯ್ಕೆ ಸಮಿತಿಯಲ್ಲಿ ಮಂಡಿಸಿ ಆಯ್ಕೆಗೊಳಿಸಿ ಸೌಲಭ್ಯಗಳನ್ನು ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.

**ಕಡತ ಸಂಖ್ಯೆ: STW/SECB/SAD/127/2024**

(ಸಿದ್ದರಾಮಯ್ಯ)
ಮುಖ್ಯಮಂತ್ರಿ